ತಂತಿ ವಿಳಾಸ: ಯೂನಿರ್ಸಿಟಿ
ದೂರವಾಣಿ ಸಂಖ್ಯೆ: 2419677/2419361
ಫ್ಯಾಕ್ಸ್: 0821-2419363/2419301

e-mail: registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್‌ಭವನ, ಮೈಸೂರು

ಸಂಖ್ಯೆ:ಜಿಎಲ್13/17/2022-23

ದಿನಾಂಕ 28.10.2025

## ಸುತ್ತೋಲೆ

ವಿಷಯ: ಕೃಷಿ, ವಿಜ್ಞಾನ, ತಂತ್ರಜ್ಞಾನ ಮತ್ತು ವೈದ್ಯಕೀಯ ವಿಷಯಗಳಲ್ಲಿ ಶ್ರೇಷ್ಠ ಪುಸ್ತಕ ಪ್ರಶಸ್ತಿಗೆ ಕನ್ನಡ ಲೇಖಕರಿಂದ ಅರ್ಜಿ ಆಹ್ವಾನಿಸಿರುವ ಬಗ್ಗೆ.

ಉಲ್ಲೇಖ: ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಇವರ ಪತ್ರ ಸಂಖ್ಯೆ:ಕವಿತಂಅ/ಶ್ರೇಷ್ಠ ಪುಸ್ತಕ/14/2025-26, ದಿನಾಂಕ 25.09.2025.

****

ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು ಕರ್ನಾಟಕ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಒಂದು ಅಂಗ ಸಂಸ್ಥೆಯಾಗಿದ್ದು, ಅಕಾಡೆಮಿ ವತಿಯಿಂದ ಕೃಷಿ, ವಿಜ್ಞಾನ, ತಂತ್ರಜ್ಞಾನ ಹಾಗೂ ವೈದ್ಯಕೀಯ ವಿಷಯಗಳ ಮೇಲೆ ಕನ್ನಡದಲ್ಲಿ ಪ್ರಕಟವಾಗುವ ಆಯ್ದ ಉತ್ತಮ ಪುಸ್ತಕಗಳಿಗೆ ಶ್ರೇಷ್ಠ ಪುಸ್ತಕ ಪ್ರಶಸ್ತಿಯನ್ನು ಎರಡು ವರ್ಷಗಳಿಗೊಮ್ಮೆ ನೀಡಲಾಗುತ್ತಿದೆ.

ಅದರಂತೆ ಜನವರಿ 2023ರಿಂದ ಡಿಸೆಂಬರ್ 2025ರ ಅವಧಿಯಲ್ಲಿ ಕೃಷಿ, ವಿಜ್ಞಾನ, ತಂತ್ರಜ್ಞಾನ ಮತ್ತು ವೈದ್ಯಕೀಯ ವಿಷಯಗಳ ಮೇಲೆ ಕನ್ನಡದಲ್ಲಿ ಪ್ರಕಟಗೊಂಡ ಪುಸ್ತಕಗಳನ್ನು ಶ್ರೇಷ್ಠ ಪುಸ್ತಕ ಪ್ರಶಸ್ತಿಗಾಗಿ ಆಯ್ಕೆ ಮಾಡುವ ಸಂಬಂಧ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಲೇಖಕರು ನಿಗದಿತ ನಮೂನೆಯಲ್ಲಿ ಅರ್ಜಿಯೊಂದಿಗೆ ಪುಸ್ತಕದ ನಾಲ್ಕು ಪ್ರತಿಗಳನ್ನು **ಜನವರಿ 05 2026ರ ಸಂಜೆ 4.00 ಗಂಟೆಯೊಳಗೆ** ಅಕಾಡೆಮಿಯ ವಿಳಾಸಕ್ಕೆ ಅಂಚೆ/ಕೋರಿಯರ್/ಮುದ್ದಾಂ ಮೂಲಕ ಸಲ್ಲಿಸಬಹುದಾಗಿದೆ.

ಇತರೆ ವಿವರಗಳಿಗೆ ಅಕಾಡೆಮಿಯ ಜಾಲತಾಣ https://kstacademy.inನಲ್ಲಿ ವೀಕ್ಷಿಸಬಹುದಾಗಿದೆ. ಸಲ್ಲಿಕೆಯಾಗುವ ಪುಸ್ತಕದ ಸಂಖ್ಯೆಗೆ ಅನುಗುಣವಾಗಿ ಪ್ರತಿ ವಿಷಯಕ್ಕೆ ಎರಡು ಪ್ರಶಸ್ತಿಗಳನ್ನು ನೀಡಲಾಗುವುದು. ಆಯ್ಕೆಯಾದ ಲೇಖಕರಿಗೆ ರೂ.25,000/-ಗಳನ್ನು ಹಾಗೂ ಪ್ರಶಸ್ತಿ ಪತ್ರವನ್ನು ನೀಡಿ ಸನ್ಮಾನಿಸಲಾಗುವುದು.

ಆದುದರಿಂದ ಮೈಸೂರು ವಿಶ್ವವಿದ್ಯಾನಿಯದ ಅಧೀನಕ್ಕೊಳಪಟ್ಟ ಸ್ನಾತಕೋತ್ತರ ವಿಭಾಗಗಳ ಅಧ್ಯಾಪಕರು/ಸಂಶೋಧನಾ ವಿದ್ಯಾರ್ಥಿಗಳು ಹಾಗೂ ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳು ಕನ್ನಡದಲ್ಲಿ ಕೃಷಿ, ವಿಜ್ಞಾನ, ತಂತ್ರಜ್ಞಾನ ಮತ್ತು ವೈದ್ಯಕೀಯ ವಿಷಯಗಳ ಮೇಲೆ ಪುಸ್ತಕಗಳನ್ನು ಪ್ರಕಟಿಸಿದ್ದಲ್ಲಿ ಸದರಿ ಪ್ರಶಸ್ತಿಗೆ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

28/10/2025

ಕುಲಸಚಿವರು
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು-570 005

ಗೆ,

1. ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರುಗಳು/ನಿರ್ದೇಶಕರು/ಸಂಯೋಜನಾಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
2. ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಟ್ಟ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳು ಹಾಗೂ ನಿರ್ದೇಶಕರು, ವಿಶ್ವವಿದ್ಯಾನಿಲಯ ತಾಂತ್ರಿಕ ಶಾಲೆ, ಮಾನಸಗಂಗೋತ್ರಿ, ಮೈಸೂರು.
3. ಆಡಳಿತಾಧಿಕಾರಿಗಳು, ಮಾನಸಗಂಗೋತ್ರಿ, ಮೈಸೂರು.
4. ಉಪ ಕುಲಸಚಿವರು(ಸಾಮಾನ್ಯ), ಆಡಳಿತ ಶಾಖೆ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ಸಂಯೋಜಕರು, ಐ.ಸಿ.ಡಿ, ಗಣಕ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು- **ಇವರಿಗೆ ವಿ.ವಿ. ಸುತ್ತೋಲೆಯನ್ನು ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಪ್ರಕಟಿಸುವುದು.**
6. ಮಾನ್ಯ ಕುಲಪತಿಯವರ/ಕುಲಸಚಿವರ/ಕುಲಸಚಿವರು(ಪರೀಕ್ಷಾಂಗ) ಆಪ್ತಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
7. ಕಛೇರಿ ಪ್ರತಿ.